## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಉಪಗ್ರಹ ಆಧಾರಿತ ಉಪ ತರಬೇತಿ ಕೇಂದ್ರ (ಸಬ್ ಸ್ಟುಡಿಯೋ)ವನ್ನು ಮರು ಸಂಸ್ಥಾಪಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ರವರ ಪತ್ರ ಸಂಖ್ಯೆ:ರಾಗ್ರಾಸಂ.ಸಿಬ್ಬಂದಿ.ಸಿಆರ್-58/2011-12, ದಿನಾಂಕ:13-09-2019.

ಪ್ರಸ್ತಾವನೆ :

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 45 ಗ್ರಾಮೂಸೌ 2018, ದಿನಾಂಕ: 17-12-2018ರ ಆದೇಶದಂತೆ, ಎಂ.ಜಿ.ಐ.ಆರ್.ಡಿ ಸಂಸ್ಥೆಯ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ (SPRC) ಆಡಳಿತ ಕಛೇರಿಯನ್ನು ಹಾಗೂ ಉಪಗ್ರಹ ಆಧಾರಿತ ಉಪ ತರಬೇತಿ ಕೇಂದ್ರ (ಸಬ್ ಸ್ಟುಡಿಯೋ)ನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಕಟ್ಟಡ, ಗಾಂಧಿನಗರ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸುವ ಸಲುವಾಗಿ ಅನುಮತಿಯನ್ನು ನೀಡಲಾಗಿರುತ್ತದೆ. ಅದರಂತೆ, ಸದರಿ ಕಛೇರಿಯನ್ನು ಪ್ರಾರಂಭಿಸುವ ಸಲುವಾಗಿ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲು ಕೆ.ಆರ್.ಐ.ಡಿ.ಎಲ್, ಬೆಂಗಳೂರುರವರು SPRC ಆಡಳಿತ ಕಛೇರಿ ಕಟ್ಟಡದ ದುರಸ್ಥಿಗಾಗಿ ರೂ.5.40ಲಕ್ಷಗಳಿಗೆ ಮತ್ತು ಉಪಗ್ರಹ ಆಧಾರಿತ ಉಪ ತರಬೇತಿ ಕೇಂದ್ರ (ಸಬ್ ಸ್ಟುಡಿಯೋ)ವನ್ನು ಮರು ಸಂಸ್ಥಾಪಿಸಲು ರೂ.41.60 ಲಕ್ಷಗಳಿಗೆ ಪರಿಷ್ಕೃತ ಅಂದಾಜು ಪಟ್ಟಿಯನ್ನು ಸಲ್ಲಿಸಿರುತ್ತಾರೆ. ಸದರಿ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ಮತ್ತು ಕಾಮಗಾರಿಯನ್ನು ಕೈಗೊಳ್ಳಲು ಮುಂಗಡ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಕೆ.ಆರ್.ಐ.ಡಿ.ಎಲ್., ಬೆಂಗಳೂರು ವಿಭಾಗರವರು ಉಪಗ್ರಹ ಆಧಾರಿತ ಉಪ ತರಬೇತಿ ಕೇಂದ್ರ (ಸಬ್ ಸ್ಟುಡಿಯೋ)ವನ್ನು ಮರು ಸಂಸ್ಥಾಪಿಸಲು ಸಲ್ಲಿಸಿರುವ ಅಂದಾಜುಪಟ್ಟಿ ಮೊತ್ತ ರೂ.41.00ಲಕ್ಷಗಳನ್ನು ದಿನಾಂಕ: 11-03-2011ರ ಪತ್ರದಲ್ಲಿ ಬೆಂಗಳೂರಿನ ಜಕ್ಕೂರಿನಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದ್ದ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರದ ಕಟ್ಟಡದ ನಿರ್ಮಾಣಕ್ಕಾಗಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್., ಬೆಂಗಳೂರುರವರಿಗೆ ಮುಂಗಡವಾಗಿ ರೂ.4.00ಕೋಟಿಗಳನ್ನು ಈ ಸಂಸ್ಥೆಯಿಂದ ದಿನಾಂಕ:14-03-2011 ರಂದು ಬಿಡುಗಡೆ ಮಾಡಲಾಗಿದ್ದು, ಈ ಅನುದಾನದಿಂದ ಸದರಿ ಕಾಮಗಾರಿಯನ್ನು ಕೈಗೊಳ್ಳಲು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯವರು ದಿನಾಂಕ:05-08-2019ರ ಪತ್ರದಲ್ಲಿ ರಾಜ್ಯ ಸರ್ಕಾರದ ಯಾವುದಾದರೂ ಯೋಜನೆಯಲ್ಲಿ ಲಭ್ಯವಿರುವ ಅನುದಾನದಿಂದ ಮೊತ್ತ ಬಿಡುಗಡೆ ಮಾಡುವುದು ಅಥವಾ ಸಂಸ್ಥೆಯ ಸ್ಯಾಟ್‌ಕಾಂ ನಿಧಿಯಲ್ಲಿ ಲಭ್ಯವಿರುವ ಉಳಿತಾಯ ನಿಧಿಯಿಂದ ಭರಿಸಲು ಅನುಮೋದನೆಯನ್ನು ನೀಡುವಂತೆ ಕೋರಿರುತ್ತಾರೆ. ಆದುದರಿಂದ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 445 ಜಿಪಸ 2019(ಭಾಗ-1), ಬೆಂಗಳೂರು, ದಿನಾಂಕ:12-11-2019.

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಎಂ.ಜಿ.ಐ.ಆರ್.ಡಿ ಸಂಸ್ಥೆಯ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ (SPRC) ಆಡಳಿತ ಕಛೇರಿಯನ್ನು ಹಾಗೂ ಉಪಗ್ರಹ ಆಧಾರಿತ ಉಪ ತರಬೇತಿ ಕೇಂದ್ರ (ಸಬ್ ಸ್ಟುಡಿಯೋ)ವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಕಟ್ಟಡ, ಗಾಂಧಿನಗರ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸಲಾಗಿದ್ದು, ಉಪಗ್ರಹ ಆಧಾರಿತ ಉಪ ತರಬೇತಿ

ಕೇಂದ್ರ (ಸಬ್ ಸ್ಟುಡಿಯೋ)ವನ್ನು ಮರು ಸಂಸ್ಥಾಪಿಸಲು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ ಕೆ.ಟಿ.ಪಿ.ಪಿ ನಿಯಮಗಳನ್ವಯ ಕರ್ನಾಟಕ ರಾಜ್ಯ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ (ಕೆ.ಆರ್.ಐ.ಡಿ.ಎಲ್) ಮುಖಾಂತರ ಸ್ಯಾಟ್‌ಕಾಂ ನಿರ್ವಹಣೆ ಅನುದಾನದಲ್ಲಿ ರೂ.41.00ಲಕ್ಷಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು ಕಡತ ಸಂಖ್ಯೆ:ಗ್ರಾಅಪ 445 ಜಿಪಸ 2019(1) ಕಂಡಿಕೆ-22 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

K.S. Mahalaxmi 12/11

(ಕೆ.ಎಸ್ ಮಹಾಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

12.11.19

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಗ್ರಾ.ಅ.ಪಂ.ರಾಜ್ ಇಲಾಖೆಯ ಗಣಕ ಕೋಶಕ್ಕೆ – ಇಲಾಖೆ ಗಣಕ ಜಾಲದಲ್ಲಿ ಅಳವಡಿಸಲು.
6. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾ.ಅ.ಪಂ.ರಾಜ್ ಇಲಾಖೆ – ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಪ್ರತಿಯನ್ನು:

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.